5. ಕೆ.ಎಲ್.ಇ ಟೆಕ್ನಲಾಜಿಕಲ್ ವಿಶ್ವವಿದ್ಯಾಲಯ ವಿಧೇಯಕ, 2012 ಮಂಡನೆಗೆ ಅನುಮತಿ ಕೋರಿಕೆ

ಶ್ರೀ ಸಿ.ಟಿ. ರವಿ (ಉನ್ನತ ಶಿಕ್ಷಣ ಸಚಿವರು) :– ಮಾನ್ಯ ಅಧ್ಯಕ್ಷರೆ, 2012ನೇ ಸಾಲಿನ ಕೆ.ಎಲ್.ಇ. ಟೆಕ್ನಲಾಜಿಕಲ್ ವಿಶ್ವವಿದ್ಯಾಲಯ ವಿಧೇಯಕವನ್ನು ಮಂಡಿಸಲು ಅನುಮತಿ ಕೋರುತ್ತೇನೆ.

ಅಧ್ಯಕ್ಷರು : ಪ್ರಸ್ತಾವನೆ ಮಂಡಿಸಲಾಯಿತು.

ಈಗ ಪ್ರಸ್ತಾವನೆಯನ್ನು ಸಭೆಯ ಮತಕ್ಕೆ ಹಾಕುತ್ತೇನೆ.

ಪ್ರಸ್ತಾವನೆ ಹೀಗಿದೆ :

2012ನೇ ಸಾಲಿನ ಕೆ.ಎಲ್.ಇ. ಟೆಕ್ನಲಾಜಿಕಲ್ ವಿಶ್ವವಿದ್ಯಾಲಯ ವಿಧೇಯಕವನ್ನು ಮಂಡಿಸಲು ಸಭೆಯು ಅನುಮತಿ ನೀಡಬೇಕು.

ಪ್ರಸ್ತಾವದ ಪರವಾಗಿರುವವರು "ಹೌದು" ಎಂದು ಸೂಚಿಸಬೇಕು
ಪ್ರಸ್ತಾವದ ವಿರೋಧವಾಗಿರುವವರು "ಇಲ್ಲ" ಎಂದು ಸೂಚಿಸಬೇಕು
ಪ್ರಸ್ತಾವವು "ಹೌದು" ಎನ್ನುವವರ ಪರವಾಗಿದೆ
ಪ್ರಸ್ತಾವವು "ಹೌದು" ಎನ್ನುವವರ ಪರವಾಗಿದೆ
ಪ್ರಸ್ತಾವವು ಅಂಗೀಕೃತವಾಗಿದೆ.

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು ಮತ್ತು ಅನುಮತಿ ನೀಡಲಾಯಿತು.

ಅಧ್ಯಕ್ಷರು : ಮಾನ್ಯ ಮಂತ್ರಿಗಳು ಈಗ ದಯವಿಟ್ಟು ವಿಧೇಯಕವನ್ನು ಮಂಡಿಸಬೇಕು.

ಶ್ರೀ ಸಿ.ಟಿ. ರವಿ (ಉನ್ನತ ಶಿಕ್ಷಣ ಸಚಿವರು) :– ಮಾನ್ಯ ಅಧ್ಯಕ್ಷರೆ, 2012ನೇ ಸಾಲಿನ ಕೆ.ಎಲ್.ಇ. ಟೆಕ್ನಲಾಜಿಕಲ್ ವಿಶ್ವವಿದ್ಯಾಲಯ ವಿಧೇಯಕವನ್ನು ಮಂಡಿಸುತ್ತೇನೆ.

ಅಧ್ಯಕ್ಷರು : ವಿಧೇಯಕವನ್ನು ಮಂಡಿಸಲಾಗಿದೆ.

(ಅನುಬಂಧ–18)

ಅಧ್ಯಕ್ಷರು :– ಈ ಎಲ್ಲ ವಿಧೇಯಕಗಳು same ಆಗಿದೆ ಅಲ್ಲವೇ?